ಶ್ರೀ ರಾಜೇಂದ್ರ ವರ್ಮ(ಹುಲ್‌ಸೂರು): ಮಾನ್ಯ ಪ್ರಾ. ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಬೀದರ್ ಜಿಲ್ಲೆಯ ಹುಲ್‌ಸೂರ್‌ಗೆ ಸರ್ಕಾರಿ ಕಿರಿಯ ಪದವಿ ಪೂರ್ವ ಕಾಲೇಜಿನ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ. ಹಾಗಿದ್ದಲ್ಲಿ ಈ ಕಾಲೇಜುಗಳನ್ನು ಮಂಜೂರು ಮಾಡುವಲ್ಲಿ ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗೂ ಎಂದು ಮಂಜೂರು ಮಾಡಲಾಗುವುದು?

ಶ್ರೀ ಹೆಚ್.ವಿಶ್ವನಾಥ್: (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ. ಬೀದರ್ ಜಿಲ್ಲೆಯ ಹುಲ್‌ಸೂರ್‌ನಲ್ಲಿ ಒಂದು ಖಾಸಗಿ ಪದವಿ ಪೂರ್ವ ಕಾಲೇಜು ಇರುತ್ತದೆ. ಈ ಕಾಲೇಜಿನ ವಿದ್ಯಾರ್ಥಿಗಳ ಸಂಖ್ಯೆ ಕನಿಷ್ಟ ಇರುತ್ತದೆ. ಆದ್ದರಿಂದ ಸರ್ಕಾರಿ ಕಾಲೇಜಿನ ಅವಶ್ಯಕತೆ ಇರುವುದಿಲ್ಲ.

ಆ. ಕಾಲೇಜಿನ ಅವಶ್ಯಕತೆ ಇರುವುದಿಲ್ಲವಾದ್ದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಹುಲ್‌ಸೂರ್ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡವನ್ನು ಸರ್ಕಾರದ ವಶಕ್ಕೆ ತೆಗೆದುಕೊಳ್ಳುವುದು.

೧೪೪೨(೧೭೫೬)

ಶ್ರೀ ರಾಜೇಂದ್ರ ವರ್ಮ(ಹುಲ್‌ಸೂರ್): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಲಸೂರ್ ಪ್ರಾಥಮಿಕ ಆರೋಗ್ಯ ಕೇಂದ್ರ ಕಾಮಗಾರಿ ಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಕಾಮಗಾರಿ ಪೂರ್ಣಗೊಂಡಿದ್ದರೂ ಸಹ ಇದುವರೆಗೂ ಸರ್ಕಾರ ತನ್ನ ವಶಕ್ಕೆ ತೆಗೆದುಕೊಳ್ಳದಿರಲು ಕಾರಣಗಳೇನು;

ಇ) ಕಟ್ಟಡವನ್ನು ಸರ್ಕಾರ ಯಾವಾಗ ತನ್ನ ವಶಕ್ಕೆ ತೆಗೆದುಕೊಳ್ಳುವುದು?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು. ಆ ಪ್ರಾ.ಆ.ಕೇಂದ್ರ ಹುಲಸೂರಿನ (ತಾ.ಬಸವಾ ಪಟ್ಟಣ) ಕಟ್ಟಡವು

ಪೂರ್ಣಗೊಂಡಿದ್ದು ಅದನ್ನು ಇಲಾಖೆಯು ವಹಿಸಿಕೊಂಡು ಕಾರ್ಯನಿರ್ವಹಿಸುತ್ತಿದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಮೈಸೂರು ನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ಗ್ರಂಥಾಲಯ ಕಟ್ಟಡ ವಿಸ್ತರಿಸುವುದು.

೧೪೪೫(೧೭೩೮)

ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ): ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯ ಹಾಗೂ ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ನಗರದ ವಿಶ್ವಮಾನವ ಜೋಡಿ ರಸ್ತೆಯಲ್ಲಿರುವ ಸಾರ್ವಜನಿಕ ಗ್ರಂಥಾಲಯದ ಹಾಲಿ ಕಟ್ಟಡ ಚಿಕ್ಕದಾಗಿದ್ದು ಇದನ್ನು ವಾಚಕರ ಅನುಕೂಲಕ್ಕಾಗಿ ವಿಸ್ತರಿಸುವ ಬಗ್ಗೆ ಸರ್ಕಾರದ ನಿಲುವೇನು;

ಆ) ಈ ಕಟ್ಟಡದ ವಿಸ್ತರಣೆಗೆ ಬೇಕಾಗುವ ಅಂದಾಜು ಮೊತ್ತವೆಷ್ಟು?

ಇ) ಈ ಕಟ್ಟಡದ ವಿಸ್ತರಣೆ ಕಾರ್ಯವನ್ನು ಕೂಡಲೇ ಕೈಗೊಳ್ಳಲಾಗುವುದೇ?

ಶ್ರೀ ಬಾಬುರಾವ್ ಚವ್ವಾಣ್: (ವಯಸ್ಕರ ಶಿಕ್ಷಣ, ಗ್ರಂಥಾಲಯ ಹಾಗೂ ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು):

ಅ) ಈಗಿನ ಅಗತ್ಯಕ್ಕನುಗುಣವಾಗಿ ಸ್ಥಳದ ಕೊರತೆಯನ್ನು ಪರಿಶೀಲಿಸಿ, ಕಟ್ಟಡವನ್ನು ವಿಸ್ತರಿಸಲಾಗುವುದು.

ಆ) ಲೋಕೋಪಯೋಗಿ ಇಲಾಖೆಯಿಂದ ಅಂದಾಜು ಮೊತ್ತವನ್ನು ಪಡೆದು ಕ್ರಮ ತೆಗೆದುಕೊಳ್ಳಲಾಗುವುದು.

ಇ) ಇಲ್ಲ.